556

## ಬೆಂಗಳೂರು ಸೆಂಟ್ರಲ್ ಜೈಲ್.

ತಾರೀಖು 8ನೇ ಮೇ ಸ್ರ 1896ನೇ ಇಸವಿ.

ಸ್ರ 1896ನೇ ಇಸವಿ ಜುಲೈ 1ರ ಲಾಗಾಯತು ಸ್ರ 1897ನೇ ಇಸವಿ ಜೂ 30ರವರಿಗೆ, ಆ ಎರಡು ದಿವಸಗಳೂ ಸೇರಿ 12 ತಿಂಗಳ ತನಕ, ಬೆಂಗಳೂರು ಸೆಂಟ್ರಲ್ ಜೈಲಿನ ಖೈದಿಗಳ ಉಪಯೋಗಕ್ಕಾಗಿ ಈ ಕೆಳಗೆ ನಮೂದಿಸುವ ಸರಕುಗಳನ್ನು ಸರಬರಾಯಿ ಮಾಡಲು ಕಂಟ್ರಾಕ್ಟು ತೆಗದುಕೊಳ್ಳುವುದಕ್ಕಾಗಿ, ಕವರನಲ್ಲಿ ಹಾಕಿ ಮೊಹರು ಮಾಡಿದ ದರಖಾಸ್ತುಗಳನ್ನು ಸ್ರ 1896ನೇ ಇಸವಿ ಜೂ 8ನೇ ಸೋಮವಾರ ಹಗಲು 1 ಘಂಟೆಯವರಿಗೆ, ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರು ತೆಗದುಕೊಳ್ಳುವರೆಂದು ಇದರಿಂದ ಭಾಯಿಸ್ ಮಾಡಿದೆ.

2. ಮೇಲೆ ಕಂಡ ತಾರೀಖಾದ ತರುವಾಯ ದರಖಾಸ್ತುಗಳನ್ನು ಹಿಡಿಯುವದಿಲ್ಲ.

3. ದರಖಾಸ್ತು ಕವರನ ಮೇಲ್‌ಭಾಗದಲ್ಲಿ ಬರೆದಿರಬೇಕಾದ ಮೇಲ್ವಿಚಾರವೇನೆಂದರೆ,

"I. ಕುರಿ ಮಾಂಸದ ಸರಬರಾಯಿ ದರಖಾಸ್ತು"

"II. ಸವದೇ ಸರಬರಾಯಿ ದರಖಾಸ್ತು."

4. ಕುರಿ ಮಾಂಸದ ಸರಬರಾಯಿಗೆ 75 ರೂಪಾಯಿ, ಸವದೇ ಸರಬರಾಯಿಗೆ 50 ರೂಪಾಯಿ, ಈ ಮೇರೆ ನಗದಾಗಿಯಾಗಲಿ ಕರೆನ್ಸೀ ನೋಟಿನ ಮೂಲಕವಾಗಿಯಾಗಲಿ ತೀವಣಾತಿಯನ್ನು ದರಖಾಸ್ತಿನ ಸಂಗಡ ಹಾಜರ್ಮಾಡಿದ ಹೊರತು, ದರಖಾಸ್ತುಗಳನ್ನು ಹಿಡಿಯುವದಿಲ್ಲ.

5. ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರವರು ಮೇಲೆ ನಮೂದಾದ ತಾರೀಖಿನಲ್ಲಿ ಆ ಕಾಲದೊಳು ಹಾಜರುಪಡಿಸಿದ ಎಲ್ಲಾ ದರಖಾಸ್ತುದಾರರ ರೂಬರೂ ಸದರೀ ದರಖಾಸ್ತುಗಳನ್ನು ತಮ್ಮ ಆಫೀಸಿನಲ್ಲಿ ಬಿಡಿಯುವರು.

6. ಈ ಕೆಳಗೆ ನಮೂದಿಸುವ ಪದಾರ್ಥಗಳನ್ನು ಒಂದು ರೂಪಾಯಿಗೆ ಇಪ್ಪತ್ತು ಪೌಂಡು ತೂಕದ ಮೇರೆ ಸರಬರಾಯಿ ಮಾಡಲಾದೀತೆಂದು ಎಲ್ಲಾ ದರಖಾಸ್ತುಗಳಲ್ಲಿಯೂ ದರವು ನಮೂದಾಗಿರತಕ್ಕದ್ದು. ಮತ್ತು ಸರಬರಾಯಿ ಮಾಡತಕ್ಕ ಪದಾರ್ಥಗಳೆಲ್ಲಾ ಒಳ್ಳೇದಾಗಿಯೂ ಸೂಪರಿಂಟೆಂಡೆಂಟರವರ ಮಂಜೂರಾತಿಗೆ ಬಳವಟ್ಟಿರತಕ್ಕದ್ದು.

### ಸಂವತ್ಸರದ ಅಂದಾಜಿನ ಖರ್ಚು.

I. ಮೂಳೆ ಇಲ್ಲದ ಮಾಂಸ—20,000 ಪೌಂಡು.

II. ಬಿಟ್ಟಿದ ಸವದೆ—ಖೈದಿಗಳ ಕೈಲಿ ಕಡಿಸತಕ್ಕದ್ದು, ತುಂಡುಗಳ ಪ್ರಮಾಣ ಒಂದು ಮಳವೆದ್ದೆಯ 1½ ಲಾಗಾಯತು 3 ಯಿಂಚು ಘನಕ್ಕವಾಗಿಯೂ ಇರತಕ್ಕದ್ದು 400,000 ಪೌಂಡುಗಳು.

ಪದಾರ್ಥಗಳು ಮೇಲೆ ಕಂಡ ಪರಿಮಾಣದ ಮೇರೆ ಇಪ್ಪತ್ತೆದ್ದೇ ಆಗಬೇಕೆಂದು ಖಾತರಿಯಾಗಿಯೂ ಹೇರೆಯುವದಿಲ್ಲ.

7. ಸೂಪರಿಂಟೆಂಡೆಂಟರು ಯಾವ ದರಖಾಸ್ತನ್ನೇ ಆಗಲಿ ಯಾವ ಕಾರಣವನ್ನೂ ಕೊಡದೆ ತಿರಸ್ಕರಿಸುವ ಹಕ್ಕನ್ನು ಉಳಿಸಿಕೊಂಡಿದ್ದಾರೆ.

8. ಯಾರ ದರಖಾಸ್ತನ್ನು ಮಂಜೂರ್ಮಾಡಿಕೊಳ್ಳುತ್ತಾರೆಯೋ ಅಂಥಾ ದರಖಾಸ್ತುದಾರರು ಹಾಜರ್ಮಾಡಿದ ತೀವಣೇ ಮೊಬಲಗು ಇಟ್ಟುಕೊಳ್ಳಲ್ಪಡುವುದು; ಮತ್ತು ಅವರ ದರಖಾಸ್ತು ಮಂಜೂರಾಗಿಲ್ಲ ಯಂದು ಅವರಿಗೆ ತಿಳಿಯಪಡಿಸಿದ ಒಂದು ವಾರದೊಳಗಾಗಿ ಅವರು ಕಂಟ್ರಾಕ್ಟು ಕರಾರನ್ನು ಬರದು ಕೊಡದೇ ಹೋದರೂ ಸರಿಯೆ, ಅಥವಾ ಕುರಿ ಮಾಂಸಕ್ಕೆ 150 ರೂಪಾಯಿ, ಸವದೆಗೆ 100 ರೂಪಾಯಿ, ಈ ಮೇರೆ ನಗದಾಗಿಯಾಗಲಿ ಸರ್ಕಾರೀ ಬಾಂಡುಗಳ ಮೂಲಕವಾಗಿಯಾಗಲಿ ಸೆಕ್ಯೂರಿಟಿಯನ್ನು ಕೊಡದೆ ಇದ್ದರೂ ಸರಿಯೆ ಮೇಲೆ ಕಂಡ ತೀವಣೇ ಮೊಬಲಗು ಸಿವಾಯಿ ಜವೆಯಾಗಿ ತೆಗೆದುಕೊಳ್ಳಲಾದೀತು.

9. ಕಂಟ್ರಾಕ್ಟರು ಯಾ ಇಜಾರೆದಾರರಿಗೆ ನಗದು ಹಣ ಮುಂಗಡವಾಗಿ ಪಾವತಿಯಾಗಲಾರದು. ಸಾಮಾನುಗಳನ್ನು ಸರಬರಾಯಿ ಮಾಡಿದ್ದಕ್ಕಾಗಿ ಹಣವನ್ನು ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರವರು ಪ್ರತಿ ತಿಂಗಳ ಗುರ್ತೀ ತಾರೀಖಾದ ತರುವಾಯ ಸಾಧ್ಯವಾದ ಮಟ್ಟಿಗೂ ಜಾಗ್ರತೆಯಲ್ಲಿ ಪಾವತಿ ಮಾಡುವರು.

10. ಸ್ಟೋರ್ ರೂಂ ಎಂಬ ಒಂದು ಉಗ್ರಾಣವನ್ನು ಸವದೆ ಇಜಾರೆದಾರರ ವಕ್ಕೆ ಕೊಡಲಾದೀತು; ಆತನು ಅದರಲ್ಲಿ ಸವುದೆಯನ್ನು ಇಟ್ಟುಕೊಳ್ಳತಕ್ಕದ್ದು, ಮತ್ತು ಅದರಲ್ಲಿ ಯಾವಾಗ್ಲೂ ಒಂದು ತಿಂಗಳಿಗೆ ಕಡಮೆ ಇಲ್ಲದಂತೆ ಸರಬರಾಯನ್ನು ಇಟ್ಟಿರಬೇಕು. ಕುರಿ ಮಾಂಸವು ಪ್ರತಿ ದಿವಸವೂ ಬೆಳಿಗ್ಗೆ 7 ಘಂಟೆ ವಳಗಾಗಿ ಜೈಲ್‌ವಲ್ಲಿ ಸಿದ್ಧಪಡಿಸತಕ್ಕದ್ದು.

11. ಈ ಕಂಟ್ರಾಕ್ಟನ್ನು ಪಿಕ್ಕಿ ಇಜಾರೆಯಾಗಿ ಕೊಡಲಾಗದು.

12. ಕಂಟ್ರಾಕ್ಟು ಷರತ್ತಿಗೆ ವಿರುದ್ಧವಾಗಿ ನಡೆದರೂ ಸರಿಯೆ, ಗುಣದಲ್ಲಿ ಕಡಮೆಯಾಗಿರತಕ್ಕ ಪದಾರ್ಥಗಳನ್ನು ಸರಬರಾಯಿ ಮಾಡಿದರೂ ಸರಿಯೆ, ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರವರು ಮುಪ್ಪಾನುಮು ಅರಿತು 50 ರೂಪಾಯಿಗೆ ಹೆಚ್ಚದೆ ಜರಿಮಾನೆಯನ್ನು ವಸೂಲು ಮಾಡಬಹುದು; ಪದೇಪದೇ ಕರಾರಿಗೆ ತಪ್ಪು ಹೋದರೆ ಕಂಟ್ರಾಕ್ಟನ್ನು ರದ್ದು ಮಾಡಿ ಸೆಕ್ಯೂರಿಟಿಯನ್ನು ಸರಕಾರಕ್ಕೆ ಮುಟ್ಟುಗೋಳಾಗಿ ತೆಗದುಕೊಳ್ಳಬಹುದು.

13. ಕಂಟ್ರಾಕ್ಟು ಕರಾರಿಗೆ ವಿರೋಧವಾಗಿ ನಡೆದ ಸಂಗತಿಗಳೆಲ್ಲೆಲ್ಲಾ ಸದರೀ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರ ಫೈಸಲೇ ಆಖೈರ್ ಫೈಸಲಾಗಿರತಕ್ಕದ್ದು.

14. ಮತ್ತೆ ಯಾವ ಸಂಗತಿ ಬೇಕಾಗಿದ್ದರೂ ಸೂಪರಿಂಟೆಂಡೆಂಟರ ಆಫೀಸಿನಲ್ಲಿ ವಿಚಾರಿಸಿ ತಿಳಿದುಕೊಳ್ಳಬಹುದು.

15. ಈ ಕಂಟ್ರಾಕ್ಟುಗಳಾ ಮೈಸೂರ ಜೈಲ್ ಇನ್ಸ್‌ಪೆಕ್ಟರ್ ಜನರಲ್‌ರವರ ಮಂಜೂರಾತಿಗೆ ಒಳಪಟ್ಟು ಇರುವವು.

16. ಕಂಟ್ರಾಕ್ಟುದಾರರು ಇಜಾರೆಯನ್ನು ತೆಗೆದುಕೊಂಡ ತರುವಾಯ ತಮ್ಮಕ್ಕ ಕರಾರನಂತೆ ನಡೆಯಲು ಇಷ್ಟ ಪಡದಿದ್ದರೆ, ಒಂದು ತಿಂಗಳಿಗೆ ಮುಂಚಿತವಾಗಿಯೇ ನೋಟಿಸ್ ಕೊಡಬೇಕು, ಮತ್ತು ಅವರ ಸೆಕ್ಯೂರಿಟಿ ಹಣವನ್ನು ಸರಕಾರಕ್ಕೆ ಬಿಟ್ಟುಬಿಡಬೇಕು.

17. ಇಜಾರೆದಾರರು ತಪ್ಪಿ ಹೋಗುವುದರಿಂದ ಸರ್ಕಾರಕ್ಕೆ ಆಗುವ ನಷ್ಟವನ್ನೂ ಅಥವಾ ಕಂಟ್ರಾಕ್ಟಿನಲ್ಲಿ ನಮೂದಾಗುವ ಪದಾರ್ಥಗಳನ್ನೂ ಸರ್ಕಾರದವರು ಕಂಟ್ರಾಕ್ಟು ದರಕ್ಕಿಂತಲೂ ಹೆಚ್ಚು ದರದ ಮೇರೆ ಬಾಜಾರದಲ್ಲಿ ಕೊಂಡುಕೊಂಡರೆ ಆ ನಷ್ಟವನ್ನು ಇಜಾರೆದಾರರು ಸರ್ಕಾರಕ್ಕೆ ಭರ್ತೀವಾಡಿ ಕೊಡಬೇಕು. ವಿಚಾರ—ಮೇಲೆ ನಮೂದಾದ ಕಂಟ್ರಾಕ್ಟುಗಳ ವಿಷಯದಲ್ಲಿ ಯಾವ ವಿಧವಾದ ರಿಯಾಯಿತಿಯೂ ದೊರೆಯಲಾರದು.

ಡಿ. ಎ. ಜೋಕ್ಸ್,
ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟ್.